ಕರ್ನಾಟಕ ಸರ್ಕಾರ

ಕಾಲೇಜು ಶಿಕ್ಷಣ ಇಲಾಖೆ

# ಸರ್ಕಾರಿ ಪ್ರಥಮದರ್ಜೆ ಕಾಲೇಜು, ಅರಕಲಗೂಡು, ಹಾಸನ ಜಿಲ್ಲೆ – 573102

## ಯುವ ರೆಡ್‌ಕ್ರಾಸ್ ಘಟಕ ವಾರ್ಷಿಕ ವರದಿ – 2018–19

ನಮ್ಮ ಕಾಲೇಜಿನ ಯುವ ರೆಡ್‌ಕ್ರಾಸ್ ಘಟಕದ 2018–19 ನೇ ಸಾಲಿನ ಚಟುವಟಿಕೆಗಳ ಉದ್ಘಾಟನಾ ಸಮಾರಂಭವನ್ನು ದಿನಾಂಕ 28.08.2019 ರಂದು ಕಾಲೇಜಿನ ಆವರಣದಲ್ಲಿ ಹಮ್ಮಿಕೊಳ್ಳಲಾಗಿತ್ತು. ಈ ಕಾರ್ಯಕ್ರಮದ ಅಧ್ಯಕ್ಷತೆಯನ್ನು ಮಾನ್ಯ ಶಾಸಕರಾದ ಶ್ರೀ. ಎ.ಟಿ. ರಾಮಸ್ವಾಮಿರವರು ವಹಿಸಿದ್ದರು. ಕಾಲೇಜು ಅಭಿವೃದ್ಧಿ ಸಮಿತಿಯ ಕಾರ್ಯದರ್ಶಿಗಳಾದ ಶ್ರೀ ಎಂ.ಸಿ. ರಂಗಸ್ವಾಮಿ ರವರು ಕಾರ್ಯಕ್ರಮವನ್ನು ಉದ್ಘಾಟಿಸಿದರು.



ನಮ್ಮ ಕಾಲೇಜಿನ ಯುವ ರೆಡ್‌ಕ್ರಾಸ್ ಘಟಕದ ಹಾಗೂ ಹಾಸನ ಜಿಲ್ಲಾ ಆರೋಗ್ಯ ಸಂಸ್ಥೆಗಳ ಸಂಯುಕ್ತಾಶ್ರಯದಲ್ಲಿ ದಿನಾಂಕ 15.02.2019 ರಂದು " ಆತ್ಮಹತ್ಯೆಯನ್ನು ತಡೆಯುವಲ್ಲಿ ಯುವಜನತೆಯ ಪಾತ್ರ" ಎಂಬ ವಿಷಯದ ಬಗ್ಗೆ ಪ್ರಬಂಧ ಸ್ಪರ್ಧೆಯನ್ನು ಆಯೋಜಿಸಲಾಗಿತ್ತು. ಈ ಸ್ಪರ್ಧೆಯಲ್ಲಿ ಕಾಲೇಜಿನ 40 ವಿದ್ಯಾರ್ಥಿಗಳು ಭಾಗವಹಿಸಿದ್ದರು. ಪ್ರಬಂಧ ಸ್ಪರ್ಧೆಯಲ್ಲಿ ಪ್ರಥಮ, ದ್ವಿತೀಯ ಹಾಗೂ ತೃತೀಯ ಬಹುಮಾನ ಪಡೆದ ವಿದ್ಯಾರ್ಥಿಗಳಿಗೆ ಹಾಸನ ಜಿಲ್ಲಾ ಆರೋಗ್ಯ ಸಂಸ್ಥೆಯ ವತಿಯಿಂದ ನಗದು ಬಹುಮಾನವನ್ನು ವಿತರಿಸಲಾಯಿತು. ವಿದ್ಯಾರ್ಥಿಗಳಲ್ಲಿ ಆತ್ಮಸ್ಥೈರ್ಯವನ್ನು ತುಂಬಿ ಆತ್ಮಹತ್ಯೆಯ ವಿರುದ್ಧ ಜಾಗೃತಿಯನ್ನು ಮೂಡಿಸುವ ಸಲುವಾಗಿ ಈ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.

ದಿನಾಂಕ 25.03.2019 ರಂದು ಯುವ ರೆಡ್‌ಕ್ರಾಸ್ ಘಟಕ ಹಾಗೂ ಅರಕಲಗೂಡು ರೋಟರಿ ಕ್ಲಬ್ ವತಿಯಿಂದ ಕಾಲೇಜಿನ ವಿದ್ಯಾರ್ಥಿಗಳಿಗೆ ರಕ್ತಗುಂಪು ಪರೀಕ್ಷೆ ಹಾಗೂ ಸ್ವಯಂಪ್ರೇರಿತ ಸಾರ್ವಜನಿಕ

ರಕ್ತದಾನ ಶಿಬಿರವನ್ನು ಹಮ್ಮಿಕೊಳ್ಳಲಾಗಿತ್ತು. ಈ ಕಾರ್ಯಕ್ರಮವನ್ನು ಕಾಲೇಜು ಅಭಿವೃದ್ಧಿ ಸಮಿತಿಯ ಕಾರ್ಯದರ್ಶಿಗಳಾದ ಶ್ರೀ ಎಂ.ಸಿ. ರಂಗಸ್ವಾಮಿರವರು ಉದ್ಘಾಟಿಸಿದರು. ಯುವ ರೆಡ್‌ಕ್ರಾಸ್ ಘಟಕದ ಸಂಚಾಲಕರಾದ ಮಂಜುನಾಥ. ಎ.ಎಲ್. ರವರು ಪ್ರಾಸ್ತಾವಿಕವಾಗಿ ಮಾತನಾಡಿ ರಕ್ತದಾನದ ಮಹತ್ವ ಹಾಗೂ ರಕ್ತದಾನ ಮಾಡುವುದರಿಂದ ನಮ್ಮ ದೇಹಕ್ಕೆ ಉಂಟಾಗುವ ಉಪಯೋಗಗಳ ಬಗ್ಗೆ ಮಾಹಿತಿ ನೀಡಿದರು. ಪದವಿ ವ್ಯಾಸಂಗ ಮಾಡುತ್ತಿರುವ ಎಲ್ಲಾ ವಿದ್ಯಾರ್ಥಿಗಳ ರಕ್ತ ಗುಂಪು ಪರೀಕ್ಷೆ ಮಾಡಿ ಮಾಹಿತಿ ತಿಳಿಸಿಕೊಡಲಾಯಿತು. ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ಜೀವರಕ್ಷಾ ಟ್ರಸ್ಟ್ ಹಾಸನ ಇವರು ಕಾಲೇಜಿನ ವಿದ್ಯಾರ್ಥಿಗಳು ಮತ್ತು ಸಾರ್ವಜನಿಕರಿಂದ 25 ಯುನಿಟ್‌ನಷ್ಟು ರಕ್ತವನ್ನು ಸಂಗಹಿಸಿದರು. ರಕ್ತದಾನ ಮಾಡಿದ ಎಲ್ಲರಿಗೂ ಪ್ರಮಾಣಪತ್ರವನ್ನು ನೀಡಲಾಯಿತು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಪ್ರಾಂಶುಪಾಲರಾದ ಶ್ರೀಮತಿ ಸ್ಮಿತಾ. ಹೆಚ್.ಎಸ್. ರವರು ವಹಿಸಿದ್ದರು. ಕಾರ್ಯಕ್ರಮದಲ್ಲಿ ಕಾಲೇಜು ಅಭಿವೃದ್ಧಿ ಸಮಿತಿಯ ಸದಸ್ಯರು, ಅರಕಲಗೂಡು ರೋಟರಿ ಕ್ಲಬ್‌ನ ಅಧ್ಯಕ್ಷರು, ಕಾರ್ಯದರ್ಶಿಗಳು, ತಾಲ್ಲೂಕು ಆರೋಗ್ಯಾಧಿಕಾರಿಗಳು, ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿಗಳು, ಕಾಲೇಜಿನ ಎಲ್ಲಾ ಸಿಬ್ಬಂದಿ ವರ್ಗ ಭಾಗವಹಿಸಿದ್ದರು.



